ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ತಾಂ.ಮ/ಯ.ವ/ಪಿ.ಆರ್/ 01A /2018-19

ಮುಖ್ಯಅಭಿಯಂತರವರ ಕಛೇರಿ
ಯಲಹಂಕ ವಲಯ,ಬೃ.ಬೆಂ.ಮ.ಪಾ.
ಬೆಂಗಳೂರು-92
01.03.2018

ಮಾರ್ಪಾಡಿತ ತಾಂತ್ರಿಕ ಮಂಜೂರಾತಿ

ವಿಷಯ: Improvements to roads drain and drilling borewells in ward no-09,10 & 11 of Vidyaranyapura sub division of Byatarayanapura division

ಉಲ್ಲೇಖ: ಈ ಕಛೇರಿಯ ತಾಂತ್ರಿಕ ಮಂಜೂರಾತಿ ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ /ತಾಂ.ಮ/ಯ.ವ/ಪಿ.ಆರ್/111C/2015-16, ದಿನಾಂಕ:03-03-2016

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2015-16ನೇ ಸಾಲಿನ ಲೋಕೋಪಯೋಗಿ ಇಲಾಖೆ ದರಪಟ್ಟಿಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯ ಮೇಲ್ಕಂಡ ಕಾಮಗಾರಿಯನ್ನು ಪಿ-3106 ಲೆಕ್ಕಶೀರ್ಷಿಕೆ ಅಡಿಯಲ್ಲಿ ರೂ 2,96,13,637 ಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಅಂದಾಜು ಪಟ್ಟಿಗೆ ಮಾರ್ಪಾಡಿತ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮುಂದುವರೆದು ಸದರಿ ಕಾಮಗಾರಿಗೆ ಈಗಾಗಲೇ ಉಲ್ಲೇಖದಂತೆ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದ್ದು, ಸದರಿ ತಾಂತ್ರಿಕ ಮಂಜೂರಾತಿಯನ್ನು ರದ್ದುಪಡಿಸಿ, ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಸ್ತಾಪಿತ ಮಾರ್ಪಾಡಿತ ಅಂದಾಜುಪಟ್ಟಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12, ದಿನಾಂಕ:05-05-2016ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಮಾರ್ಪಾಡಿತ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ಮಾರ್ಪಾಡಿತ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 3 ಕ್ರ.ಸಂ 01A ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಕಾಮಗಾರಿಯನ್ನು ಕರ್ನಾಟಕ ಪಾರದರ್ಶಕ ನಿಯಮಾನುಸಾರ ನಿರ್ವಹಿಸಲು ಕ್ರಮ ವಹಿಸುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Poperty register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಸಹಾಯಕ ನಿಯಂತ್ರಕರು (ಹಣಕಾಸು), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.

Scanned by CamScanner